
ಆಶಾ ಜ್ಯುವೆಲ್ಲರ್ಸ್
ಕನಕದಾಸ ರಸ್ತೆ, ಉಡುಪಿ 576101. ಫೋನ್: 0820 2523514

ಸಾಪ್ತಾಹಿಕ
ಉದಯವಾಣಿ
ಜನಮನದ ಜೀವನಾಡಿ
ಮಣಿಪಾಲ । ಬೆಂಗಳೂರು । ಹುಬ್ಬಳ್ಳಿ । ಕಲಬುರಗಿ । ದಾವಣಗೆರೆ । ಮುಂಬಯಿ
Regd.No.UDP/1259/2018-20 | udayavani.com | UDAYAVANI – KANNADA DAILY – MANIPAL ಮಣಿಪಾಲ, ರವಿವಾರ, ಜುಲೈ 29, 2018 ಬೆಲೆ: ₹ 5-00 ವಿದೇಶ ಬೆಲೆ: ₹ 6-00 ಪುಟಗಳು 1

# ವಿಜ್ಞಾನ ಸ್ಪರ್ಧೆಗಳಿಗೆ ಅನುದಾನಕ್ಕೆ ಬಡತನ

■ ಕೇಶವ ಕುಂದರ್



ಮಂಗಳೂರು, ಜು. 28: ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಚಿಂತನೆ, ಮನೋಭಾವ ಬೆಳೆಸುವುದಕ್ಕಾಗಿ ಶಿಕ್ಷಣ ಇಲಾಖೆ ಹಲವು ವಿಜ್ಞಾನ ಸ್ಪರ್ಧೆಗಳನ್ನು ಏರ್ಪಡಿಸುತ್ತದೆ. ಆದರೆ ವಿಜೇತ ವಿದ್ಯಾರ್ಥಿಗಳು ಬಹುಮಾನ ಮೊತ್ತದಿಂದ ಉತ್ತೇಜಿತರಾಗುವ ಬದಲು ನಿರಾಶರಾಗುವ ಸಾಧ್ಯತೆಯೇ ಹೆಚ್ಚು. ಏಕೆಂದರೆ ಈ ಮೊತ್ತ ಜುಜುಬಿ ಎಂಬಷ್ಟು ಅಲ್ಪ!

ವಿಜ್ಞಾನ ಸ್ಪರ್ಧೆಗಳ ಆಯೋಜನೆ ಮತ್ತು ವಿಜೇತ ವಿದ್ಯಾರ್ಥಿಗಳಿಗೆ ನೀಡುವ ಪ್ರಶಸ್ತಿ ಮೊತ್ತದಲ್ಲಿ ಶಿಕ್ಷಣ ಇಲಾಖೆ ತೋರಿಸುತ್ತಿರುವ ಜಿಪುಣತನದಿಂದಾಗಿ ನೈಜ ಉದ್ದೇಶ ಈಡೇರುತ್ತಿಲ್ಲ. ಮೊತ್ತದಲ್ಲಿ ಏರಿಕೆ ಮಾಡಬೇಕು ಎಂದು ಶಿಕ್ಷಕ ಸಮುದಾಯ ಬೇಡಿಕೆ ಸಲ್ಲಿಸುತ್ತ ಬಂದಿದ್ದರೂ ಇಲಾಖೆಯಿಂದ ಈವರೆಗೆ ಸ್ಪಂದನೆ ದೊರಕಿಲ್ಲ.

**ಹಲವು ಸ್ಪರ್ಧೆಗಳು**

ರಾಜ್ಯದ ಪ್ರೌಢ ಶಿಕ್ಷಣ ನಿರ್ದೇಶನಾಲಯದ ವತಿಯಿಂದ ವಿಜ್ಞಾನ ವಿಚಾರ ಗೋಷ್ಠಿ, ವಿಜ್ಞಾನ ನಾಟಕ ಸ್ಪರ್ಧೆ, ವಸ್ತು ಪ್ರದರ್ಶನಗಳನ್ನು ಬ್ಲಾಕ್, ಜಿಲ್ಲಾ ಮತ್ತು ವಿಭಾಗಗಳ ಮಟ್ಟದಲ್ಲಿ ಆಯೋಜಿಸಲಾಗುತ್ತಿದೆ. ಬ್ಲಾಕ್ ಹಾಗೂ ಜಿಲ್ಲಾಮಟ್ಟದಲ್ಲಿ ಎಲ್ಲ ಡಯಟ್‌ಗಳ ಪ್ರಾಂಶುಪಾಲರ ಉಸ್ತುವಾರಿ ಮತ್ತು ಮಾರ್ಗದರ್ಶನದಲ್ಲಿ ಇವು ಆಯೋಜನೆಗೊಳ್ಳುತ್ತವೆ. ಪ್ರಸಕ್ತ ಸಾಲಿನಲ್ಲಿ ಈ ಸ್ಪರ್ಧೆಗಳಿಗೆ ಶಿಕ್ಷಣ ಇಲಾಖೆಯು ಬೆಂಗಳೂರಿನ ವಿಶ್ವೇಶ್ವರಯ್ಯ ಕೈಗಾರಿಕಾ ಮತ್ತು ತಾಂತ್ರಿಕ ವಸ್ತು ಸಂಗ್ರಹಾಲಯದ ಸಹಯೋಗ ಪಡೆದುಕೊಂಡಿದೆ.

**ಅಲ್ಪ ಮೊತ್ತದ ಅನುದಾನ**

ಸ್ಪರ್ಧೆಗಳ ಆಯೋಜನೆಗೆ ವೆಚ್ಚ ಹಾಗೂ ಪ್ರಶಸ್ತಿ ಮೊತ್ತ ನಿಗದಿಪಡಿಸಿ ಪ್ರೌಢ ಶಿಕ್ಷಣ ನಿರ್ದೇಶನಾಲಯ ಸುತ್ತೋಲೆ ಹೊರಡಿಸಿದೆ. ವಿಜ್ಞಾನ ವಿಚಾರಗೋಷ್ಠಿ ಸ್ಪರ್ಧೆಗೆ 2,500 ರೂ. ಅನುದಾನ ನಿಗದಿಪಡಿಸಲಾಗಿದೆ. ಬಹುಮಾನ ಮೊತ್ತ, ತೀರ್ಪುಗಾರರ ಸಂಭಾವನೆ, ಲಘು ಉಪಾಹಾರ ಇವೆಲ್ಲವೂ ಇದರೊಳಗೇ ಬರಬೇಕು. ಬಹುಮಾನದ ಒಟ್ಟು ಮೊತ್ತ ಕೇವಲ 600 ರೂ. ಪ್ರಥಮ ಪ್ರಶಸ್ತಿಗೆ 300 ರೂ. ಲಭಿಸಿದರೆ ದ್ವಿತೀಯ ಪ್ರಶಸ್ತಿಯಾಗಿ 200 ರೂ. ಹಾಗೂ ತೃತೀಯ ಸ್ಥಾನಿಗೆ 100 ರೂ. ಸಿಗುತ್ತದೆ.

ಜಿಲ್ಲಾ ಮಟ್ಟದ ಸ್ಪರ್ಧೆ ಆಯೋಜನೆಗೆ 6000 ರೂ. ಅನುದಾನವಿದೆ. ಪ್ರಥಮ 650 ರೂ., ದ್ವಿತೀಯ 600 ರೂ. ಹಾಗೂ ತೃತೀಯ 500 ರೂ. ಹಾಗೂ 3 ಮಂದಿಗೆ ಸಮಾಧಾನಕರ ಬಹುಮಾನವಾಗಿ ತಲಾ 300 ರೂ. ಇದೆ. ವಿಜ್ಞಾನ ನಾಟಕ ಸ್ಪರ್ಧೆಗೆ ತಾಲೂಕು ಮಟ್ಟಕ್ಕೆ 2,500 ರೂ., ಜಿಲ್ಲಾ ಮಟ್ಟಕ್ಕೆ 8,000 ರೂ. ನೀಡಲಾಗುತ್ತದೆ. ಬ್ಲಾಕ್ ಮಟ್ಟದಲ್ಲಿ ವಿಜೇತ ತಂಡಗಳಿಗೆ ಪ್ರಶಸ್ತಿಯಾಗಿ ನಿಗದಿಯಾಗಿರುವುದು ಕೇವಲ 600 ರೂ. ಇಷ್ಟನ್ನೇ ಹಂಚಿ ನೀಡಬೇಕಾಗಿದೆ. ಜಿಲ್ಲಾ ಮಟ್ಟದಲ್ಲಿ ಪ್ರಶಸ್ತಿಗಾಗಿ ನಿಗದಿಯಾಗಿರುವುದು 3,800 ರೂ. ಮಾತ್ರ. ಪ್ರಥಮ 1,200 ರೂ., ದ್ವಿತೀಯ 1,000 ರೂ. ಹಾಗೂ ತೃತೀಯ 800 ರೂ. ನೀಡಬೇಕು ಎಂದು ಇಲಾಖೆ ಸೂಚಿಸಿದೆ.

ಸ್ಪರ್ಧೆಗಳನ್ನು ಕಡ್ಡಾಯವಾಗಿ ಆಯೋಜಿಸಲು ಜಿಲ್ಲಾ ಡಯಟ್‌ಗಳಿಗೆ ನಿರ್ದೇಶನವಿದೆ. ಆದುದರಿಂದ ಸಿಕ್ಕಿದಷ್ಟು ಅನುದಾನದಲ್ಲೇ ನಡೆಸಬೇಕಿದೆ.

**ಅನುದಾನ ಹೆಚ್ಚಳಕ್ಕೆ ಬೇಡಿಕೆ**

ಸ್ಪರ್ಧೆಗಳನ್ನು ವ್ಯವಸ್ಥಿತವಾಗಿ ಆಯೋಜಿಸಿ ಗುಣಮಟ್ಟ ಹೆಚ್ಚಿಸುವ ಮೂಲಕ ಉದ್ದೇಶಗಳು ಸಾಕಾರಗೊಳ್ಳುವತ್ತ ಗಮನ ಹರಿಸುವುದು ಅವಶ್ಯ. ರಾಜ್ಯ, ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ವಿಜ್ಞಾನ-ತಂತ್ರಜ್ಞಾನ ಸ್ಪರ್ಧೆಗಳು ಹೆಚ್ಚು ಹೆಚ್ಚು ಆಯೋಜನೆಗೊಳ್ಳುತ್ತಿವೆ. ಇವುಗಳಿಗೆ ರಾಜ್ಯದ ವಿದ್ಯಾರ್ಥಿ ಸಮುದಾಯವನ್ನು ಸಿದ್ಧಗೊಳಿಸುವುದಕ್ಕೆ ಈ ವಿಜ್ಞಾನ ಸ್ಪರ್ಧೆಗಳು ಮಹತ್ವದ ವೇದಿಕೆ. ಆದರೆ ಪ್ರಸ್ತುತ ನಿಗದಿಯಾಗಿರುವ ಜುಜುಬಿ ಅನುದಾನದಿಂದ ಇದು ಕಷ್ಟಸಾಧ್ಯ ಎನ್ನುವುದು ಶಿಕ್ಷಕರ ಅಳಲು. ಆದ್ದರಿಂದ ಅನುದಾನ ಹೆಚ್ಚಿಸಿ ಎಂದು ಶಿಕ್ಷಕ ಸಮುದಾಯ ಬೇಡಿಕೆ ಸಲ್ಲಿಸುತ್ತಲೇ ಬಂದಿದೆ.

**“** ಪ್ರೌಢ ಶಿಕ್ಷಣ ನಿರ್ದೇಶನಾಲಯ ಈಗಾಗಲೇ ವಿವಿಧ ವಿಜ್ಞಾನ ಸ್ಪರ್ಧೆಗಳಿಗೆ ಅನುದಾನ ನಿಗದಿ ಪಡಿಸಿ ಸುತ್ತೋಲೆ ಹೊರಡಿಸಿದೆ. ಶಾಲಾ ಹಂತದಲ್ಲಿ ಸ್ಪರ್ಧೆಗಳು ಪ್ರಾರಂಭಗೊಂಡಿದ್ದು ಇದು ಪೂರ್ಣಗೊಂಡ ಬಳಿಕ ಬ್ಲಾಕ್ ಮಟ್ಟದಲ್ಲಿ ಸ್ಪರ್ಧೆಗಳು ನಡೆಯಲಿವೆ. ಸುತ್ತೋಲೆಯಲ್ಲಿ ಸೂಚಿಸಿದಂತೆ ಅನುದಾನವನ್ನು ವಿನಿಯೋಗಿಸಿ ಅದರ ಪರಿಮಿತಿಯೊಳಗೆ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ.

**-ಸಿಪ್ರಿಯನ್ ಮೊಂತೇರೋ**
ಡಿಡಿಪಿಐ, ಡಯಟ್

**“** ವಿಜ್ಞಾನ ಸ್ಪರ್ಧೆಗಳು, ಪ್ರತಿಭಾ ಕಾರಂಜಿ ಸೇರಿದಂತೆ ವಿದ್ಯಾರ್ಥಿಗಳಿಗೆ ಆಯೋಜಿಸುತ್ತಿರುವ ವಿವಿಧ ಸ್ಪರ್ಧೆಗಳಿಗೆ ಶಿಕ್ಷಣ ಇಲಾಖೆ ಪ್ರಸ್ತುತ ನೀಡುತ್ತಿರುವ ಅನುದಾನ ಬಹಳಷ್ಟು ಕಡಿಮೆ ಇದೆ. ಹೆಚ್ಚಿಸಬೇಕು ಎಂದು ಶಿಕ್ಷಕರ ಸಂಘದಿಂದ ಇಲಾಖೆಗೆ ಬೇಡಿಕೆ ಸಲ್ಲಿಸಲಾಗಿದೆ.

**-ರಾಮಕೃಷ್ಣ ಶಿರೂರು,**
ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹಶಿಕ್ಷಕ ಸಂಘದ ರಾಜ್ಯ ಉಪಾಧ್ಯಕ್ಷ

ಭಾನುವಾರ, ಜುಲೈ 29, 2018 | ₹ 5.00
www.prajavani.net
/prajavani.net
ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಕನ್ನಡ ದಿನಪತ್ರಿಕೆ

CENTRAL LIBRARY

ಹುಲಿ ಉಳಿಸಿ
ಅಂತರರಾಷ್ಟ್ರೀಯ ಹುಲಿ ದಿನದ ಅಂಗವಾಗಿ ಬೆಂಗಳೂರಿನ ಗಿರಿನಗರ ಶಾಂತಿನಿಕೇತನ ಫೌಂಡೇಷನ್ ಶಾಲೆಯ ವಿದ್ಯಾರ್ಥಿಗಳು ಹುಲಿ ಸಂರಕ್ಷಣೆ ಬಗ್ಗೆ ಜಾಗೃತಿ ಮೂಡಿಸಿದರು

# ‘ಖಾಸಗಿ ವಿ.ವಿ. ಅಂಕುಶ ನಮ್ಮ ಕೈಯಲ್ಲಿದೆ’

ವಾರದ ಸಂದರ್ಶನ

**ನ್ಯಾಯಮೂರ್ತಿ ಡಿ.ವಿ. ಶೈಲೇಂದ್ರ ಕುಮಾರ್**
ಶುಲ್ಕ ನಿಯಂತ್ರಣ ಸಮಿತಿ ಅಧ್ಯಕ್ಷ

• ಎಸ್. ರವಿಪ್ರಕಾಶ್


‘ಹಣ ಮಾಡುವ ದುರುದ್ದೇಶ ಹೊಂದಿದವರು ಶಿಕ್ಷಣ ಕ್ಷೇತ್ರಕ್ಕೆ ಕಾಲಿಟ್ಟ ಮೇಲೆ ಶಿಕ್ಷಣವು ಮಾಫಿಯಾ ಆಗಿದೆ. ಶಿಕ್ಷಣ ಈಗ ರಾಜಕಾರಣಿಗಳ ಹಿಡಿತದಲ್ಲಿದೆ. ‘ಶುಲ್ಕ ನಿಯಂತ್ರಣ ಸಮಿತಿ’ ಸರಿಯಾಗಿ ಕೆಲಸ ಮಾಡಿದ್ದೇ ಆದಲ್ಲಿ, ಶುಲ್ಕ ಬೇಕಾಬಿಟ್ಟಿ ಏರಿಕೆಗೆ ಕಡಿವಾಣ ಹಾಕಲು ಸಾಧ್ಯ’ ಎನ್ನುತ್ತಾರೆ ಸಮಿತಿಯ ಅಧ್ಯಕ್ಷರೂ ಆಗಿರುವ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಡಿ.ವಿ. ಶೈಲೇಂದ್ರ ಕುಮಾರ್.

**• ವೃತ್ತಿಪರ ಕೋರ್ಸ್‌ಗಳ ಶುಲ್ಕ ನಿಯಂತ್ರಣ ಸಮಿತಿಯ ಉದ್ದೇಶವೇನು? ಸಮಿತಿ ಗರಿಷ್ಠ ಶೇ 8 ರಷ್ಟು ಪರಿಷ್ಕರಣೆಗೆ ಶಿಫಾರಸು ಮಾಡಿದ್ದರೂ ಕೆಲವು ಶಿಕ್ಷಣ ಸಂಸ್ಥೆಗಳು ಹೆಚ್ಚಿಗೆ ಶುಲ್ಕವನ್ನು ವಸೂಲಿ ಮಾಡುತ್ತಿವೆಯಲ್ಲ?**

ಸುಪ್ರೀಂ ಕೋರ್ಟ್ ನೀಡಿದ ನಿರ್ದೇಶನದ ಮೇರೆಗೆ ರಾಜ್ಯ ಸರ್ಕಾರವು ‘ಶುಲ್ಕ ನಿಯಂತ್ರಣ ಸಮಿತಿ’ ರಚಿಸಿದೆ. ಇದು ಸ್ವತಂತ್ರ ಮತ್ತು ಸ್ವಾಯತ್ತ ಸಂಸ್ಥೆ. ವೃತ್ತಿಪರ ಕೋರ್ಸ್‌ಗಳನ್ನು ನಡೆಸುವ ಖಾಸಗಿ ಮತ್ತು ಅನುದಾನ ರಹಿತ ಕಾಲೇಜುಗಳಲ್ಲಿ ಸರ್ಕಾರದ ಸೀಟು ಪಡೆಯುವ ವಿದ್ಯಾರ್ಥಿಗಳಿಗೆ ಶುಲ್ಕವನ್ನು ನಿಗದಿ ಮಾಡುವುದು ಸಮಿತಿಯ ಕೆಲಸ. ಹೇಗೆ ಕೇಂದ್ರ ಚುನಾವಣಾ ಆಯೋಗ ಮತ್ತು ಮಾಹಿತಿ ಹಕ್ಕುಗಳ ಆಯೋಗ ಸ್ವತಂತ್ರವಾಗಿ ಕಾರ್ಯ ನಿರ್ವಹಿಸುತ್ತವೆಯೋ ಅದೇ ರೀತಿ ಶುಲ್ಕ ನಿಯಂತ್ರಣ ಸಮಿತಿಯೂ ಸ್ವತಂತ್ರ ಸಂಸ್ಥೆ. ಇದರಲ್ಲಿ ಸರ್ಕಾರ ಮೂಗು ತೂರಿಸುವಂತಿಲ್ಲ. 86 ಕಾಲೇಜುಗಳನ್ನು ಹೊರತುಪಡಿಸಿ ಉಳಿದ ಎಂಜಿನಿಯರಿಂಗ್ ಕಾಲೇಜುಗಳು ಲೆಕ್ಕಪತ್ರ ಸಲ್ಲಿಸಿದ್ದರಿಂದ ಅಲ್ಲಿ ಗರಿಷ್ಠ ಶೇ 8 ರಷ್ಟು ಶುಲ್ಕ ಹೆಚ್ಚಳ ಮಾಡಲು ಅವಕಾಶ ನೀಡಿದ್ದೇವೆ. ಸಮಿತಿಯು ನಿಗದಿ ಪಡಿಸಿದ ಶುಲ್ಕಕ್ಕಿಂತ ಹೆಚ್ಚು ಪಡೆದರೆ, ಸರ್ಕಾರ ಅಂತಹ ಕಾಲೇಜುಗಳ ವಿರುದ್ಧ ಕ್ರಮ ತೆಗೆದುಕೊಳ್ಳಬಹುದು. ಇಲ್ಲವೇ ನ್ಯಾಯಾಲಯದ ಮೊರೆ ಹೋಗಬಹುದು.


**• ಶುಲ್ಕ ನಿಗದಿಗೆ ಪರ್ಯಾಯ ಸಮಿತಿ ರಚಿಸಲು ರಾಜ್ಯ ಸರ್ಕಾರ ಮುಂದಾಗಿದೆ. ಈ ಮೂಲಕ ಶುಲ್ಕ ನಿಯಂತ್ರಣ ಸಮಿತಿಯನ್ನು ಹದ್ದುಬಸ್ತಿನಲ್ಲಿ ಇಡುವ ಪ್ರಯತ್ನ ನಡೆಸಿದೆಯೇ?**

ಶುಲ್ಕ ನಿಯಂತ್ರಣ ಸಮಿತಿಗೆ ಅಧ್ಯಕ್ಷರನ್ನು ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗಳೇ ನೇಮಕ ಮಾಡುತ್ತಾರೆ. ಅಧ್ಯಕ್ಷರನ್ನು ನೇಮಕ ಮಾಡುವ ಅಧಿಕಾರ ಸರ್ಕಾರಕ್ಕೆ ಇಲ್ಲ. ಆದ್ದರಿಂದ ಅಧ್ಯಕ್ಷರು ಸರ್ಕಾರದ ಅಡಿಯಾಳಾಗಿ ವರ್ತಿಸುವ ಅಗತ್ಯವಿಲ್ಲ. ಸರ್ಕಾರ ತನ್ನ ತೃಪ್ತಿಗಾಗಿ ಬೇಕಾದ ಸಮಿತಿ ರಚಿಸಬಹುದು; ಆದರೆ, ಈ ಸಮಿತಿಯು ಶಾಸನಬದ್ಧ ಸಮಿತಿ ಎಂಬುದನ್ನು ಸರ್ಕಾರ ಮರೆಯಬಾರದು. ಈ ಹಿಂದಿನ ಅಧ್ಯಕ್ಷರು ಶುಲ್ಕ ಪರಿಷ್ಕರಣೆ ಮಾಡಿ ಮುಚ್ಚಿದ ಲಕೋಟೆಯಲ್ಲಿ ಸರ್ಕಾರಕ್ಕೆ ಸಲ್ಲಿಸಿದ್ದರಂತೆ. ತಮಾಷೆ ಎಂದರೆ, ಸರ್ಕಾರ ಅದನ್ನು ಬಿಡಿಸಿಯೂ ನೋಡಲಿಲ್ಲ. ಅದಕ್ಕಿಂತ ಹಿಂದೆ ಅಧ್ಯಕ್ಷರಾಗಿದ್ದವರು ಶುಲ್ಕ ನಿಗದಿಯ ಗೋಜಿಗೇ ಹೋಗಲಿಲ್ಲ. ಸಮಿತಿ ಇದೇ ಮೊದಲ ಬಾರಿಗೆ ಶುಲ್ಕ ನಿಗದಿ ಮಾಡಿದೆ. ಡೀಮ್ಡ್ ವಿಶ್ವವಿದ್ಯಾಲಯಗಳು ನ್ಯಾಯಾಲಯಕ್ಕೆ ಹೋಗಿವೆ. ಅದಕ್ಕೆ ನನ್ನ ತಕರಾರು ಇಲ್ಲ.



**• ಡೀಮ್ಡ್ ಮತ್ತು ಖಾಸಗಿ ವಿಶ್ವವಿದ್ಯಾಲಯಗಳ ಶುಲ್ಕ ನಿಗದಿ ಮಾಡುವ ಅಧಿಕಾರ ಸಮಿತಿಗೆ ಇದೆಯೇ. ತಾವು ಯಾವುದೇ ವ್ಯಾಪ್ತಿಗೂ ಒಳಪಡುವುದಿಲ್ಲ ಎಂದು ಅವು ಹೈಕೋರ್ಟ್ ಮೆಟ್ಟಿಲು ಹತ್ತಿವೆಯಲ್ಲ?**

ಡೀಮ್ಡ್ ಮತ್ತು ಖಾಸಗಿ ವಿಶ್ವವಿದ್ಯಾಲಯಗಳೂ ಸಮಿತಿಯ ಅಧೀನಕ್ಕೆ ಬರುತ್ತವೆ. ಆದರೆ, ಈ ಸಂಸ್ಥೆಗಳು, ‘ನಾವು ಸಮಿತಿಯ ವ್ಯಾಪ್ತಿಗೆ ಬರುವುದಿಲ್ಲ’ ಎಂದು ಪದೇ ಪದೇ ಅದೇ ರಾಗ ಹಾಡುತ್ತಿವೆ. ಈ ಧೋರಣೆ ಸರಿಯಲ್ಲ. ವೃತ್ತಿಪರ ಶಿಕ್ಷಣ ಸಂಸ್ಥೆಗಳ ಕಾಯ್ದೆಯ ಸೆಕ್ಷನ್ 2(1)(ಪಿ) ಮತ್ತು 2(1)(ಕ್ಯೂ) ಅನ್ವಯ ಈ ವಿಶ್ವವಿದ್ಯಾಲಯಗಳ ಶುಲ್ಕ ನಿಗದಿ ಮಾಡುವ ಅಧಿಕಾರ ಸಮಿತಿಗೆ ಇದೆ. ಈ ಸಂಸ್ಥೆಗಳಲ್ಲಿ ಯಾವ ಕೋರ್ಸ್‌ಗಳನ್ನು ವೃತ್ತಿಪರ ಎಂದು ಅಧಿಸೂಚನೆ ಮಾಡಲಾಗಿದೆಯೋ ಅವುಗಳಿಗೆ ಶುಲ್ಕ ನಿಗದಿ ಮಾಡಬಹುದು. ಉಳಿದವುಗಳಿಗೆ ಮಾಡಲು ಸಾಧ್ಯವಿಲ್ಲ. ಆದ್ದರಿಂದ, ಡೀಮ್ಡ್ ಮತ್ತು ಖಾಸಗಿ ವಿಶ್ವವಿದ್ಯಾಲಯಗಳನ್ನು ನಿಯಂತ್ರಿಸುವ ಅಂಕುಶ ಸಮಿತಿಯ ಬಳಿ ಇದೆ.



**• ಉತ್ತಮ ಗುಣಮಟ್ಟದ ಶಿಕ್ಷಣ ಎಲ್ಲರಿಗೂ ಕೈಗೆಟುಕುವಂತಿರಬೇಕು. ಆದರೆ, ದೇಶದಲ್ಲಿ ಶಿಕ್ಷಣವು ಮಾಫಿಯಾ ಆಗಿ ಬೆಳೆದಿದೆ. ಇದನ್ನು ನಿಯಂತ್ರಿಸುವುದು ಹೇಗೆ?**

ಇದಕ್ಕೆ ನಾನು ಯಾವ ಸಲಹೆ ನೀಡಲು ಆಗುತ್ತದೆ ಹೇಳಿ! ಎಲ್ಲರಿಗೂ ಕಡಿಮೆ ವೆಚ್ಚದಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ಸಿಗುವಂತಾಗಬೇಕು. ಈ ಕಾರಣಕ್ಕೆ ಶುಲ್ಕ ನಿಯಂತ್ರಣ ಸಮಿತಿ ರಚಿಸಲು ಸುಪ್ರೀಂ ಕೋರ್ಟ್ ಸರ್ಕಾರಗಳಿಗೆ (ಟಿ.ಎಂ.ಎ.ಪೈ ವರ್ಸಸ್ ಕರ್ನಾಟಕ ಸರ್ಕಾರ ಮತ್ತು ಇಸ್ಲಾಮಿಕ್ ಶಿಕ್ಷಣ ಸಂಸ್ಥೆ ಪ್ರಕರಣದಲ್ಲಿ) ನಿರ್ದೇಶನ ನೀಡಿತ್ತು. ಶಿಕ್ಷಣವು ಮಾಫಿಯಾ ಆಗಿ ಬೆಳೆದಿರುವುದು ಎಲ್ಲರಿಗೂ ಗೊತ್ತೇ ಇದೆ. ಇವುಗಳನ್ನು ನಡೆಸುತ್ತಿರುವವರು ರಾಜಕಾರಣಿಗಳಲ್ಲವೇ? ಹಣ ಮಾಡಲು ಇವರು ಏನು ಮಾಡಬೇಕೋ ಅದನ್ನು ಮಾಡಿಕೊಳ್ಳುತ್ತಾರೆ. ಈ ಅವ್ಯವಸ್ಥೆಯನ್ನು ಸರಿಪಡಿಸಲು ಶುಲ್ಕ ನಿಯಂತ್ರಣ ಸಮಿತಿ ತನ್ನ ಅಧಿಕಾರವನ್ನು ಸರಿಯಾಗಿ ಬಳಸಬೇಕು. ಕಡಿಮೆ ಶುಲ್ಕದಲ್ಲೂ ಶಿಕ್ಷಣ ಕೊಡಲು ಸಾಧ್ಯವಿದೆ. ಸಾಕಷ್ಟು ಎಂಜಿನಿಯರಿಂಗ್ ಕಾಲೇಜುಗಳು ವರ್ಷಕ್ಕೆ ₹ 50,000 ಶುಲ್ಕ ಪಡೆದು ಶಿಕ್ಷಣ ನೀಡಲು ತಯಾರಿವೆ. ಇನ್ನೂ ಕೆಲವು ಕಾಲೇಜುಗಳು ಅದಕ್ಕಿಂತಲೂ ಕಡಿಮೆ ಶುಲ್ಕಕ್ಕೆ ಪ್ರವೇಶ ನೀಡಲು ಸಾಧ್ಯ ಎನ್ನುತ್ತವೆ. ಅಂದ ಮೇಲೆ ಎಲ್ಲ ಕಾಲೇಜುಗಳಿಗೂ ಕಡಿಮೆ ಶುಲ್ಕದಲ್ಲಿ ಶಿಕ್ಷಣ ನೀಡಲು ಸಾಧ್ಯ ಎಂದಾಯಿತಲ್ಲವೇ?

**• ಸಮಿತಿಗೆ ರಾಜ್ಯ ಸರ್ಕಾರದ ಸಹಕಾರ ಹೇಗಿದೆ?**

(ಜೋರಾದ ನಗು)... ಇಲ್ಲಿಯವರೆಗೆ ಯಾರೂ ಶುಲ್ಕ ನಿಗದಿ ಮಾಡಿರಲಿಲ್ಲ. ಹಾಗಾಗಿ ಸರ್ಕಾರ ಸಮಿತಿಯತ್ತ ಕಣ್ಣು ಹಾಯಿಸಿರಲಿಲ್ಲ. ನಮಗೆ ವಹಿಸಿದ ಕೆಲಸ ಅಚ್ಚುಕಟ್ಟಾಗಿ ಮಾಡುತ್ತಿದ್ದೇವೆ. ಉನ್ನತ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆಯ ಹೆಚ್ಚುವರಿ ಮುಖ್ಯಕಾರ್ಯದರ್ಶಿ ಹಾಗೂ ಆಯುಷ್ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಸಮಿತಿಯ ಸದಸ್ಯರು. ಇಲ್ಲಿಯವರೆಗೆ ಈ ಮೂವರೂ ಯಾವುದೇ ಸಭೆಗೂ ಹಾಜರಾಗಿಲ್ಲ. ‘ನೋಟಿಸ್ ಬಂದಿಲ್ಲ’ ಎನ್ನುತ್ತಾರೆ. ಸಭೆ ಇದ್ದಾಗ ಹಾಜರಾಗಬೇಕಾದುದು ಅವರ ಕರ್ತವ್ಯ ಅಲ್ಲವೇ? ಅವರಿಗೆ ವಿಶೇಷ ಆಹ್ವಾನ ಕೊಟ್ಟು ಕರೆಯಲು ಆಗುತ್ತದೆಯೇ? ಐಎಎಸ್ ಅಧಿಕಾರಿಗಳಿಗೆ ಒಂದು ಬಗೆಯ ಬಿಗುಮಾನ. ತಾವೇ ದೊಡ್ಡವರು ಎಂಬ ಧೋರಣೆ ಅವರಲ್ಲಿ ಇರುತ್ತದೆ. ಸಮಿತಿಗೆ ಸರ್ಕಾರದ ಕಡೆಯಿಂದ ಎಂಥ ಸಹಕಾರ ಸಿಗುತ್ತಿದೆ ಎಂಬುದನ್ನು ಇದರಿಂದ ಊಹಿಸಬಹುದು.

**• ವೃತ್ತಿಪರ ಕೋರ್ಸ್‌ಗಳ ಶಿಕ್ಷಣ ಸಂಸ್ಥೆಗಳು ಸಮಿತಿಗೆ ಏಕೆ ಲೆಕ್ಕ ಕೊಡಬೇಕು?**

ಪ್ರತಿಯೊಂದು ಕಾಲೇಜೂ ಶುಲ್ಕ ಪರಿಷ್ಕರಣೆಗೆ ಅನುಮತಿ ಕೇಳುವುದಕ್ಕೆ ಮೊದಲು ಸಮಿತಿಗೆ ಲೆಕ್ಕಪತ್ರ ನೀಡುವುದು ಕಡ್ಡಾಯ. ಆಡಿಟರ್ ಮೂಲಕ ಧೃಢೀಕರಿಸಿಯೇ ಲೆಕ್ಕಪತ್ರ ನೀಡಬೇಕು. ಲೆಕ್ಕಪತ್ರ ನೀಡದ ಸಂಸ್ಥೆಗಳಿಗೆ ಶುಲ್ಕ ಪರಿಷ್ಕರಣೆ ಮಾಡುವುದಿಲ್ಲ.

ಚಿತ್ರಗಳು: ರಂಜು ಪಿ. ❖

Mayuri brings you Lunch
MAYURI PURE VEG RISTORANTE
BUFFET EVERYDAY
Widespread of North Indian, Chinese and Continental Food
Starts at ₹249 only
WHITE LOTUS HOTEL- Green Park Premier
Maruthi Veethika Road, Thenkapete, Udupi-576010, Karnataka
Ph: 0820-2531211, 2531611

ಉದಯವಾಣಿ
ಜನಮನದ ಜೀವನಾಡಿ
ಮಣಿಪಾಲ । ಬೆಂಗಳೂರು । ಹುಬ್ಬಳ್ಳಿ । ಕಲಬುರಗಿ । ದಾವಣಗೆರೆ । ಮುಂಬಯಿ

CENTRAL LIBRARY

ಆಭರಣ'ದಲ್ಲಿ ಕೊಡುಗೆಗಳ ಸುರಿಮಳೆ

Regd.No.UDP/1259/2018-20 | udayavani.com | UDAYAVANI – KANNADA DAILY – MANIPAL ಮಣಿಪಾಲ, ಸೋಮವಾರ, ಜುಲೈ 30, 2018 ಬೆಲೆ: ₹ 5-00 ವಿದೇಶ ಬೆಲೆ: ₹ 6-00 ಪುಟಗಳು 12+4

# 2ನೇ ಸುತ್ತಿನ ಸೀಟು ಹಂಚಿಕೆ ಪ್ರಕಟ

ಬೆಂಗಳೂರು, ಜು.29: ಸಿಇಟಿ ಎರಡನೇ ಸುತ್ತಿನ ಸೀಟು ಹಂಚಿಕೆಯ ಫಲಿತಾಂಶ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಸೀಟು ಹಂಚಿಕೆಯ ಫಲಿತಾಂಶ ಪರಿಶೀಲಿಸಿ ಅಭ್ಯರ್ಥಿಗಳು ನಮಗೆ ಬೇಕಾದ ಸೀಟಿನ ಆಧಾರದಲ್ಲಿ ಚಾಯ್ಸ್ ಆಯ್ಕೆ ಮಾಡಿಕೊಳ್ಳಬೇಕು. ನಾಲ್ಕು ಚಾಯ್ಸ್‌ಗಳಲ್ಲಿ ಯಾವುದಾದರೂ ಒಂದನ್ನು ಆಯ್ಕೆ ಮಾಡಿಕೊಳ್ಳುವ ಮೊದಲು ಅದರಿಂದ ಆಗಬಹುದಾದ ಪರಿಣಾಮದ ಬಗ್ಗೆಯೂ ಎಚ್ಚರ ವಹಿಸಬೇಕು ಎಂದು ಪ್ರಾಧಿಕಾರ ತಿಳಿಸಿದೆ.

**ವೇಳಾಪಟ್ಟಿ:** ವೈದ್ಯಕೀಯ, ದಂತ ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕೆ ಎರಡನೇ ಸುತ್ತಿನ ಸೀಟು ಹಂಚಿಕೆ ವೇಳಾಪಟ್ಟಿ ಪ್ರಕಟಿಸಲಾಗಿದೆ. ವೈದ್ಯಕೀಯ, ದಂತ ವೈದ್ಯಕೀಯ ಕೋರ್ಸ್ ಪಡೆಯಲು ಅರ್ಹತೆ ಹೊಂದಿದ್ದು ಆಸಕ್ತಿ ಇರುವ ಅಭ್ಯರ್ಥಿಗಳು ಸೂಕ್ತ ಆಯ್ಕೆಯ ತೀರ್ಮಾನ ಎಚ್ಚರಿಕೆಯಿಂದ ತೆಗೆದುಕೊಳ್ಳಬೇಕು. ಈ ಸಂಬಂಧ ವಿವರವಾದ ಮಾಹಿತಿ ಪ್ರಾಧಿಕಾರದ ವೆಬ್‌ಸೈಟ್ http://kea.kar.nic.inನಲ್ಲಿ ಲಭ್ಯವಿದೆ.